# ಕರ್ನಾಟಕ ವಿಧಾನ ಪರಿಷತ್

## 150ನೇ ಅಧಿವೇಶನ-2023

| ನಿಯಮ-72ರಡಿಯ ಗಮನ ಸೆಳೆಯುವ ಸೂಚನೆ | |
|---|---|
| ಸೂಚನೆ ನೀಡಿದ ಸದಸ್ಯರ ಹೆಸರು | ಶ್ರೀ ಯು.ಬಿ.ವೆಂಕಟೇಶ್, ವಿಧಾನಪರಿಷತ್ತಿನ ಮಾನ್ಯ ಸದಸ್ಯರು |

## ವಿಷಯ

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಲ್ಲಿ ಜಾಗೃತಿ ಮೂಡಿಸುವ ನೆಪದಲ್ಲಿಸಾರ್ವಜನಿಕ ಸಂಗ್ರಹಣೆ ಹಾಗೂ ಪಾರದರ್ಶಕತೆ ಕಾಯ್ದೆಯ ಅನುಸಾರ ಯಾವುದೇ ರೂಪುರೇಷೆಗಳಿಲ್ಲದೇ ವಾರ್ತಾ ಮತ್ತು ಪ್ರಚಾರ ಇಲಾಖೆಯನ್ನು ಸಂಪೂರ್ಣವಾಗಿ ಕಡೆಗಣಿಸಿ ಐದು ಖಾಸಗಿ ಜಾಹೀರಾತು ಸಂಸ್ಥೆಗಳಿಗೆ ಅನುಕೂಲ ಮಾಡಿಕೊಡುವ ಹಾಗೂ ಹಣ ದುರುಪಯೋಗಪಡಿಸುವ ಉದ್ದೇಶದಿಂದ ದಿನಾಂಕ:30.01.2023ರಂದು ಏಕ ಸದಸ್ಯ ಸಭೆಯಲ್ಲಿ ನಿರ್ಣಯಕೈಗೊಂಡು ಆದೇಶಿಸಿರುವ ಪತ್ರದ No:KSPCB/SEO-A7T/Single source Com.Meeting/2022-23, ದಿನಾಂಕ:01.02.2023ರಲ್ಲಿ ಅವ್ಯವಹಾರದ ಕುರಿತು ಹಾಗೂ ಮುಂದೆ ಸರ್ಕಾರ ಕೈಗೊಳ್ಳಬೇಕಾದ ಕ್ರಮಗಳ ಕುರಿತು.

## ಸೂಚನೆಯ ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಹೇಳಿಕೆ

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವರು ದಿನಾಂಕ:03.07.2023 ರ ಪತ್ರದಲ್ಲಿ ಅಧ್ಯಕ್ಷರು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ, 1999ರ ಉಪಬಂಧಗಳನ್ನು ಉಲ್ಲಂಘಿಸಿರುವ ಸಂಬಂಧ ಮುಂದಿನ ಸೂಕ್ತ ಕ್ರಮಕ್ಕಾಗಿ ವರದಿಸಿರುತ್ತಾರೆ. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವರ ಪತ್ರದ ಅನುಸಾರವಾಗಿ, ಹಿರಿಯ ಅಧಿಕಾರಿಯಿಂದ ವಿವರಗಳನ್ನು ಪರಿಶೀಲಿಸಿ ಪ್ರಾಥಮಿಕ ವರದಿ ಪಡೆಯಲು ಕ್ರಮಕೈಗೊಳ್ಳಲಾಗಿದೆ. ಪ್ರಾಥಮಿಕ ವರದಿಯನ್ನು ಆಧರಿಸಿ ಕಾನೂನು ರೀತಿಯಲ್ಲಿ ಕ್ರಮ ಜರುಗಿಸಲಾಗುವುದು.

(ಈಶ್ವರ್ ಬಿ. ಖಂಡ್ರೆ)
ಅರಣ್ಯ, ಜೀವಿಪರಿಸ್ಥಿತಿ ಹಾಗೂ ಪರಿಸರ ಸಚಿವರು

ಎಫ್‌ಇಇ/ 175/ಇಪಿಸಿ/2023